## 106. ಉನ್ನತ ಶಿಕ್ಷಣ ಸುಧಾರಣೆಗೆ ಮಹತ್ವದ ಚರ್ಚೆ

ವಿಧಾನಮಂಡಲ ಕಲಾಪ ಆರಂಭವಾಗಲಿರುವ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಸಚಿವರಾದ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರು ಉನ್ನತ ಶಿಕ್ಷಣ ಇಲಾಖೆಯಲ್ಲಿ ಕಳೆದ ಒಂದು ವರ್ಷದಿಂದ ಜಾರಿಗೆ ತಂದಿರುವ ವಿವಿಧ ಸುಧಾರಣೆಗಳ ಬಗ್ಗೆ ಮಾಹಿತಿ ನೀಡಿದ್ದಾರೆ.

ಕೋವಿಡ್-19 ಬರುವ ಮುನ್ನ ಹಾಗೂ ಕೋವಿಡ್-19 ನಂತರ ಇಲಾಖೆಯಲ್ಲಿ ಅನುಷ್ಠಾನಗೊಂಡಿರುವ ಆನ್‌ಲೈನ್ ಅಫಿಲಿಯೇಷನ್, ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಆದ್ಯತೆ ಸೇರಿ ಎಲ್ಲ ಕಾರ್ಯಕ್ರಮಗಳ ಬಗ್ಗೆ ಪರಿಷತ್ ಸದಸ್ಯರಿಗೆ ವಿವರ ನೀಡಿದರು. ಕೋವಿಡ್ ಹಿನ್ನೆಲೆಯಲ್ಲಿ ಡಿಜಿಟಲ್ ಲರ್ನಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದ್ದು ಅದು ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದೆ ಎಂದಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಜಾರಿಯಲ್ಲಿರುವ ಉಪನ್ಯಾಸಕರ ವರ್ಗಾವಣೆಯ ನಿಯಮಗಳನ್ನು ಬದಲಿಸಲಾಗುವುದು. ಈಗಿರುವ 2016ರ ವರ್ಗಾವಣೆ ಕಾಯ್ದೆಯನ್ನು ವಾಪಸ್ಸು ಪಡೆದು ಸೂಕ್ತವಾದ ತಿದ್ದುಪಡಿಗಳೊಂದಿಗೆ ಹೊಸ ನಿಯಮಗಳನ್ನು ತರಲಾಗುವುದು. ಕಾಯ್ದೆಯು ಅತ್ಯಂತ ಪರಿಣಾಮಕಾರಿ ಹಾಗೂ ಪರಿಪೂರ್ಣವಾಗಿರಲಿದೆ. ವಿಶ್ವವಿದ್ಯಾಲಯಗಳಲ್ಲಿನ ಆಡಳಿತಕ್ಕೆ ಮತ್ತಷ್ಟು ಚುರುಕು ನೀಡುವ ಉದ್ದೇಶದಿಂದ ಎಲ್ಲ ವಿವಿಗಳ ಕುಲಸಚಿವ ಅಧಿಕಾರಿಗಳನ್ನು ನೇಮಕ ಮಾಡಲು ಸುಗ್ರೀವಾಜ್ಞೆ ತರಲಾಗಿದೆ. ಅದಕ್ಕೆ ಅಧಿವೇಶನದಲ್ಲಿಯೇ ಒಪ್ಪಿಗೆ ಪಡೆಯಲಾಗುವುದು ಎಂದಿದ್ದಾರೆ.

**ಹೊಸ ಖಾಸಗಿ ಶಾಲೆಗಳ ನವೀಕರಣ:** ಖಾಸಗಿ ಶಾಲೆಗಳ ನೋಂದಣಿ ನವೀಕರಣಕ್ಕೆ ಸಂಬಂಧಿಸಿದಂತೆ ಕೊರೋನಾ ಸಂದರ್ಭದಲ್ಲಿ ಉದ್ಭವಿಸಿರುವ ಸಮಸ್ಯೆಗಳನ್ನು ಪರಿಹರಿಸಲು ಸಭೆ ನಡೆಸಿ ಅಗತ್ಯ ವಿನಾಯಿತಿ ನೀಡಲು ಸೂಚಿಸಲಾಗುವುದು ಎಂದು ಸಚಿವ ಎಸ್. ಸುರೇಶ್ ಕುಮಾರ್ ಹೇಳಿದ್ದಾರೆ. ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ, ಶೈಕ್ಷಣಿಕ ಸಾಲಿಗೆ ಸಂಬಂಧಿಸಿದ ಅನುಮತಿಗಳನ್ನು ನೀಡುವಾಗ ನಿಯಮಾವಳಿಗಳನ್ನು ಸರಳೀಕರಣಗೊಳಿಸುವ ಅನಿವಾರ್ಯತೆಯಿದೆ.

ಕೋವಿಡ್ ಹಿನ್ನೆಲೆಯಲ್ಲಿ ಸಾಮಾನ್ಯ ಸಮಸ್ಯೆಗಳಿಗೆ ಒಳಗಾದ ಕಾರಣ ಪಾಲಕರಿಂದ ಶುಲ್ಕ ಸಂಗ್ರಹಕ್ಕೆ ಒತ್ತಾಯ ಮಾಡಬಾರದೆಂದು ಖಾಸಗಿ ಶಿಕಣ ಸಂಸ್ಥೆಗಳಿಗೆ ಆದೇಶ ನೀಡಿದ್ದೇವೆ. ಬಜೆಟ್ ಶಾಲೆಗಳು ತೊಂದರೆಗೀಡಾದ್ದನ್ನು ಗಮನದಲ್ಲಿಟ್ಟುಕೊಂಡು ಹಾಗೂ ಖಾಸಗಿ ಶಾಲೆಗಳ ಶಿಕ್ಷಕರ ವೇತನಕ್ಕೆ ಸಮಸ್ಯೆಯಾಗಿರುವ ಅಂಶ ಪರಿಗಣಿಸಿ, 15 ದಿನಗಳ ಹಿಂದೆ ಶುಲ್ಕ ವಸೂಲಾತಿಗೆ ಅನುಮತಿ ನೀಡಲಾಗಿದೆ ಎಂದಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:17.09.2020